**ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹಾನಗಲ್.**

ದಿನಾಂಕಃ ನೇ ತಿಂಗಳು 2022 ರಂದು

ಸಿಸಿ ನಂ.960/2021
(ಸಿಸಿ ನಂ.167/2019)

ಫಿರ್ಯಾದುದಾರರುಃ ಸರಕಾರ (ಆಡೂರ ಪೊಲೀಸರಿಂದ)

ವಿರುದ್ಧ

ಆರೋಪಿಃ ಕುಮಾರ, ತಂದೆ ನಿಂಗಪ್ಪ ಹುಬ್ಬಳ್ಳೇರ,
25 ವರ್ಷ, ಉಃ ಕೂಲಿ,
ವಾಸಃ ಸಿದಿಹಳ್ಳಿ ಗ್ರಾಮ, ಸೊರಬ ತಾಲ್ಲೂಕು,
ಶಿವಮೊಗ್ಗ ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 251 ರ ಅಡಿಯಲ್ಲಿ ಆರೋಪಣಾ ಸಾರಾಂಶ**

ದಿನಾಂಕಃ 26-05-2018 ರಂದು ರಾತ್ರಿ 8.40 ಗಂಟೆ ಸುಮಾರಿಗೆ ಆಡೂರ ಪೊಲೀಸ್ ಠಾಣಾ ವ್ಯಾಪ್ತಿಯ ಗೊಂದಿ ಗ್ರಾಮದ ಶೇಖಪ್ಪ ಕೊಂಡೋಜಿರವರ ಕೋಳಿ ಫಾರ್ಮ ಹತ್ತಿರ ಶಿವಮೊಗ್ಗ-ಹಾನಗಲ್ ರಸ್ತೆಯ ಮೇಲೆ ಆರೋಪಿಯಾದ ನೀವು ಮೋಟಾರು ಸೈಕಲ್ ಸಂಖ್ಯೆ ಕೆಎ-15/ಡಬ್ಲ್ಯು-9140 ರಲ್ಲಿ ಮಹಾದೇವಪ್ಪರವರನ್ನು ಹಿಂಬದಿಯಲ್ಲಿ ಕೂರಿಸಿಕೊಂಡು ಸಿಡ್ಡಿಹಳ್ಳಿ ಕಡೆಯಿಂದ ಹಾನಗಲ್ ಕಡೆಗೆ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಅತೀವೇಗ ಹಾಗು ನಿರ್ಲಕ್ಷತನದಿಂದ ಚಾಲನೆ ಮಾಡಿದ್ದು, ಆದುದರಿಂದ ನೀವು ಭಾರತೀಯ ದಂಡ ಸಂಹಿತೆಯ ಕಲಂ 279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗು ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನವನ್ನು ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಅತೀವೇಗ ಹಾಗು ನಿರ್ಲಕ್ಷತನದಿಂದ ಸಿಡ್ಡಿಹಳ್ಳಿ ಕಡೆಯಿಂದ ಹಾನಗಲ್ ಕಡೆಗೆ ಚಾಲನೆ ಮಾಡಿಕೊಂಡು ಬಂದು ರಸ್ತೆಯ ಮೇಲೆ ಇದ್ದ ಗೋವಿನ ಜೋಳದ ರಾಶಿಗೆ ಡಿಕ್ಕಿ ಪಡಿಸಿದ ಪರಿಣಾಮ ಹಿಂಬದಿ ಸವಾರರಾದ ಮಹಾದೇವಪ್ಪರವರು ಬಿದ್ದು, ಅವರ ತಲೆಗೆ ಬಲವಾದ ಪೆಟ್ಟಾಗಿ ಅವರು ಸ್ಥಳದಲ್ಲಿಯೇ ಮೃತಪಟ್ಟಿದ್ದು ನೀವು ಭಾರತೀಯ ದಂಡ ಸಂಹಿತೆಯ ಕಲಂ 304-ಎ ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

ಮೂರನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗು ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನವನ್ನು ಯಾವುದೇ ಚಾಲನಾ ಪರವಾನಿಗೆ ಪ್ರಮಾಣ ಪತ್ರ ಹೊಂದದೆ ಚಾಲನೆ ಮಾಡಿದ್ದು ನೀವು ಭಾರತೀಯ ಮೋಟಾರು ವಾಹನ ಕಾಯಿದೆಯ ಕಲಂ 3 ಮತ್ತು 4 ಸಹಕಲಂ 181 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

ಕೊನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗು ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನಕ್ಕೆ ಯಾವುದೇ ವಾಹನದ ವಿಮಾ ಪ್ರಮಾಣ ಪತ್ರ ಹೊಂದದೆ ಚಾಲನೆ ಮಾಡಿದ್ದು ನೀವು ಭಾರತೀಯ ಮೋಟಾರು ವಾಹನ ಕಾಯಿದೆಯ ಕಲಂ 146 ಸಹಕಲಂ 196 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

ಪ್ರಶ್ನೆ:1 ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?

ಉತ್ತರಃ

ಪ್ರಶ್ನೆ: 2 ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ?

ಉತ್ತರಃ

ಮೇಲಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

(ಅನಿತ)
ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ., ಹಾನಗಲ್.